# Akashvani : Bangalore
# Regional Bulletin In Kannada
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ
## 07.02.2025 / 14.30 hrs

ಮುಖ್ಯಾಂಶಗಳು

೧. ಸಣ್ಣ ಹಣಕಾಸು ಸಂಸ್ಥೆಗಳಿಗೆ ಸಂಬಂಧಿಸಿದ ರಾಜ್ಯ ಸರ್ಕಾರದ ಸುಗ್ರೀವಾಜ್ಞೆ ತಿರಸ್ಕರಿಸಿದ ರಾಜ್ಯಪಾಲರು

೨. ಮುಡಾ ಹಗರಣ: ಸಿಬಿಐ ತನಿಖೆ ಕೋರಿ ಸಲ್ಲಿಸಿದ ಅರ್ಜಿ ತಿರಸ್ಕರಿಸಿದ ಉಚ್ಚ ನ್ಯಾಯಾಲಯ

೩. ರಾಣೆಬೆನ್ನೂರಿನಲ್ಲಿ 'ಕರ್ನಾಟಕ ವೈಭವ-ವೈಚಾರಿಕ ಹಬ್ಬ ೨೦೨೫' ಉದ್ಘಾಟಿಸಿದ ಉಪರಾಷ್ಟ್ರಪತಿ ಜಗದೀಪ್ ಧನಕರ್

೪. ಎಪಿಎಂಸಿಗಳಲ್ಲಿ ಆಹಾರ ಸಂಸ್ಕರಣಾ ಘಟಕಗಳಿಗೆ ಮಾರುಕಟ್ಟೆ ಶುಲ್ಕ ವಿನಾಯಿತಿ ವಿಸ್ತರಣೆ ಇಲ್ಲ- ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್

<><*<><>*><>

ಸಣ್ಣ ಹಣಕಾಸು ಸಂಸ್ಥೆಗಳಿಂದ ಜನರಿಗೆ ಆಗುತ್ತಿರುವ ದೌರ್ಜನ್ಯ ತಡೆಗಟ್ಟಲು ರಾಜ್ಯ ಸರ್ಕಾರ ಕಳುಹಿಸಿದ್ದ ಸುಗ್ರೀವಾಜ್ಞೆಯನ್ನು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ತಿರಸ್ಕರಿಸಿದ್ದಾರೆ ಎಂದು ಮುಖ್ಯಮಂತ್ರಿ ಕಚೇರಿ ತಿಳಿಸಿದೆ. ಸುಗ್ರೀವಾಜ್ಞೆಯಲ್ಲಿ ಪ್ರಸ್ತಾಪಿಸಲಾಗಿರುವ ೧೦ ವರ್ಷಗಳ ಶಿಕ್ಷೆ ಹಾಗೂ ೫ ಲಕ್ಷ ರೂಪಾಯಿ ದಂಡ ವಿಪರೀತವಾಗಿದೆ. ಈಗ ಚಾಲ್ತಿಯಲ್ಲಿರುವ ಕಾನೂನನ್ನು ಉಪಯೋಗಿಸಿಕೊಂಡು ಪೊಲೀಸ್ ಇಲಾಖೆ ಪರಿಸ್ಥಿತಿಯನ್ನು ನಿಯಂತ್ರಿಸಬಹುದು. ಸುಗ್ರೀವಾಜ್ಞೆಯು ಸಣ್ಣ ಹಣಕಾಸು ಸಂಸ್ಥೆಗಳ ಮೇಲೆ ಋಣಾತ್ಮಕ ಪರಿಣಾಮ ಬೀರಲಿದೆ. ಬಡವರಿಗೂ ತೊಂದರೆಯಾಗಲಿದೆ ಎಂದು ಸುಗ್ರೀವಾಜ್ಞೆ ತಿರಸ್ಕಾರಕ್ಕೆ ರಾಜ್ಯಪಾಲರು ಕಾರಣ ನೀಡಿದ್ದಾರೆ ಎಂದು ಮುಖ್ಯಮಂತ್ರಿ ಕಚೇರಿ ಮಾಹಿತಿ ನೀಡಿದೆ.

<><*<><>*><>

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ - ಮುಡಾ ನಿವೇಶನಗಳ ಅಕ್ರಮ ಹಂಚಿಕೆ ಆರೋಪಕ್ಕೆ ಸಂಬಂಧಿಸಿದ ತನಿಖೆಯನ್ನು ಸಿಬಿಐ ಗೆ ವಹಿಸಬೇಕು ಎಂದು ಕೋರಲಾದ ಅರ್ಜಿಯನ್ನು ಉಚ್ಚ ನ್ಯಾಯಾಲಯ ತಿರಸ್ಕರಿಸಿದೆ. ದೂರುದಾರರಾದ ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಸಲ್ಲಿಸಿದ್ದ ರಿಟ್ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಉಚ್ಚ ನ್ಯಾಯಾಲಯದ ಧಾರವಾಡ ಪೀಠ, ಅರ್ಜಿಯನ್ನು ವಜಾಗೊಳಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಅವರಿಗೆ ಅಕ್ರಮವಾಗಿ ಮುಡಾ ನಿವೇಶನ ಹಂಚಿಕೆ ಮಾಡಲಾಗಿದೆ. ನಿವೇಶನ ಹಂಚಿಕೆಯಲ್ಲಿ ಹಗರಣ ನಡೆದಿದೆ, ಇದರ ಪ್ರಾಮಾಣಿಕ ತನಿಖೆಗೆ ಪ್ರಕರಣವನ್ನು ಸಿಬಿಐಗೆ ವಹಿಸಬೇಕು ಎಂದು ಅರ್ಜಿ ಸಲ್ಲಿಸಿದರು.

<><*<><>*><>

ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಿರಪರಾಧಿ ಎಂಬುದಾಗಿ ಹೈಕೋರ್ಟ್ ಹೇಳಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಡಾ ಸಂಪೂರ್ಣ ಪ್ರಕರಣವನ್ನು ಸಿಬಿಐ ತನಿಖೆಗೆ ನೀಡುವಂತೆ ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಹೈಕೋರ್ಟ್‌ನಲ್ಲಿ ಕೋರಿದ್ದರು. ಆ ಅರ್ಜಿಯನ್ನು ಹೈಕೋರ್ಟ್ ತಿರಸ್ಕರಿಸಿದೆ. ಇದರ ಅರ್ಥ ಸಿದ್ದರಾಮಯ್ಯನವರು ನಿರಪರಾಧಿ ಎಂದು ಹೈಕೋರ್ಟ್ ಹೇಳಿಲ್ಲ ಎಂದು ವಿವರಿಸಿದರು.

ಇದರಿಂದ ಮುಡಾ ಹಗರಣದ ವಿಷಯದಲ್ಲಿ ಬಿಜೆಪಿ ಹೋರಾಟ ಮತ್ತು ಪಾದಯಾತ್ರೆಗೆ ಹಿನ್ನಡೆ ಆಗಿಲ್ಲ ಎಂದು ಬಿ.ವೈ.ವಿಜಯೇಂದ್ರ ಹೇಳಿದರು.

<><*<><>*><>

ಮೈಸೂರು ಆಕಾಶವಾಣಿಗೆ ೯೦ ವರ್ಷ ತುಂಬಿರುವ ಹಿನ್ನೆಲೆಯಲ್ಲಿ, ಪ್ರಸಾರ ಭಾರತಿ ಹಾಗೂ ಆಕಾಶವಾಣಿ ಮೈಸೂರು ಈಬಿ ೧೦೦.೬ ಇವರ ಸಹಯೋಗದೊಂದಿಗೆ ಮೈಸೂರು ಆಕಾಶವಾಣಿ-೯೦ ವೈಭವ ಜಾನಪದ ರಂಗ ಕಾರ್ಯಕ್ರಮವನ್ನು ಮಂಡ್ಯ ನಗರದ ನಾಲ್ವಡಿ ಕೃಷ್ಣರಾಜ ಒಡೆಯರ್ ಕಲಾಮಂದಿರದಲ್ಲಿ ಹಮ್ಮಿಕೊಳ್ಳಲಾಗಿತ್ತು. ಜನಪದ, ಸಾಂಸ್ಕೃತಿಕ ಕಾರ್ಯಕ್ರಮಗಳು ಯಶಸ್ವಿಯಾಗಿ ನಡೆದವು. ನೂರಾರು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಮೈಸೂರು ಆಕಾಶವಾಣಿ ವಿಭಾಗದ ಸಹಾಯಕ ನಿರ್ದೇಶಕರಾದ ಟಿ.ವಿ.ವಿದ್ಯಾಶಂಕರ್ ಮಾತನಾಡಿ, ಮಂಡ್ಯ ಭಾಗದಲ್ಲಿ ಜಾನಪದಕ್ಕೆ ವಿಶೇಷ ಸ್ಥಾನಮಾನವಿದೆ. ಆ ನಿಟ್ಟಿನಲ್ಲಿ ಈ ಜಿಲ್ಲೆಯಲ್ಲಿ ಜಾನಪದ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸಾಮಾಜಿಕ ಜಾಲತಾಣದ ಹಾವಳಿ ನಡುವೆ ಆಕಾಶವಾಣಿ ಕೇಳುಗರ ಸಂಖ್ಯೆ ಹೆಚ್ಚಿದೆ ಎಂದ ಅವರು, ಆಕಾಶವಾಣಿಯ ಕಾರ್ಯಕ್ರಮ ಕೇಳುವುದಕ್ಕೆ ಮಕ್ಕಳು ಒತ್ತು ನೀಡಬೇಕು ಎಂದು ಕರೆ ನೀಡಿದರು.

**<><*<><>*><>**

ಕಾಡು ಪ್ರಾಣಿಗಳ ಹಾವಳಿ ತಪ್ಪಿಸುವಂತೆ ಒತ್ತಾಯಿಸಿ ಇಂದು ಚಿಕ್ಕಮಗಳೂರು ಜಿಲ್ಲೆಯ ಕಳಸ ಪಟ್ಟಣದಲ್ಲಿ ಅಂಗಡಿ-ಮುಂಗಟ್ಟುಗಳನ್ನು ಬಂದ್ ಮಾಡಿ, ಪ್ರತಿಭಟನೆ ನಡೆಸಲಾಯಿತು.

ಕಳಸ ತಾಲೂಕಿನಲ್ಲಿ ಕಾಡು ಕೋಣ ದಾಳಿಯಿಂದ ನಿನ್ನೆ ರೈತರೊಬ್ಬರು ಮೃತಪಟ್ಟಿದ್ದಾರೆ. ಈ ಹಿಂದೆ ಕೂಡ ಕಾಡಾನೆ, ಕಾಡು ಕೋಣಗಳ ದಾಳಿಗಳು ನಡೆದಿದ್ದು, ಅರಣ್ಯ ಇಲಾಖೆ ಸೂಕ್ತವಾಗಿ ಕ್ರಮಕೈಗೊಳ್ಳಬೇಕೆಂದು ತಾಲೂಕು ರೈತ ಸಂಘ, ಕಾಫಿ ಬೆಳೆಗಾರರ ಸಂಘಗಳು ಬಂದ್‌ಗೆ ಕರೆ ನೀಡಿವೆ. ನಗರದಲ್ಲಿ ಹಲವು ಸಂಘಟನೆಗಳ ಮುಖಂಡರು ಕೂಡ ಪ್ರತಿಭಟನೆ ನಡೆಸಿದರು.

**<><*<><>*><>**

ಹಾವೇರಿ ಜಿಲ್ಲೆ ರಾಣೆಬೆನ್ನೂರಿನಲ್ಲಿಂದು 'ಕರ್ನಾಟಕ ವೈಭವ - ವೈಚಾರಿಕ ಹಬ್ಬ ೨೦೨೫' ಕಾರ್ಯಕ್ರಮವನ್ನು ಉಪರಾಷ್ಟ್ರಪತಿ ಜಗದೀಪ್ ಧನಕರ್ ಉದ್ಘಾಟಿಸಿದರು. ನಂತರ ಮಾತನಾಡಿದ ಅವರು, ಭಾರತ ಜಗತ್ತಿನ ಐದನೇ ದೊಡ್ಡ ಆರ್ಥಿಕ ಶಕ್ತಿಯಾಗಿದೆ. ಮುಂಬರುವ ದಿನಗಳಲ್ಲಿ ಮೂರನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ನೂರಾರು ವರ್ಷಗಳ ಕಾಲ ಭಾರತೀಯರ ಮೇಲೆ ವಿದೇಶಿ ದಾಳಿಗಳು ನಡೆದರೂ ನಮ್ಮ ಸಂಸ್ಕೃತಿ ನಶಿಸಿಲ್ಲ. ಅದರ ಬದಲು ಭದ್ರವಾಗಿ ನೆಲೆಯೂರಿದೆ. ನಮ್ಮ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ನಮ್ಮ ಕರ್ತವ್ಯವಾಗಿದೆ ಎಂದರು. ವಿಕಸಿತ ಭಾರತ ಎಂಬುವುದು ಕನಸಲ್ಲ. ಅದೊಂದು ಸಂಕಲ್ಪ. ವಿಕಸಿತ ಭಾರತವನ್ನು ಸಾರ್ಥಕವಾಗಿಸುವ ಶಕ್ತಿ ಇಂದಿನ ಯುವಜನತೆಯಲ್ಲಿದೆ ಎಂದು ಅವರು ಅಭಿಪ್ರಾಯಪಟ್ಟರು. ೩೭೦ನೇ ವಿಧಿ ರದ್ದಾದ ಬಳಿಕ ೨ ಕೋಟಿಗೂ ಅಧಿಕ ಪ್ರವಾಸಿಗರು ಕಳೆದ ವರ್ಷ ಜಮ್ಮು-ಕಾಶ್ಮೀರಕ್ಕೆ ಭೇಟಿ ನೀಡಿದ್ದಾರೆ. ರಾಷ್ಟ್ರ ಹಿತಕ್ಕಿಂತ ಯಾವುದು ದೊಡ್ಡದಲ್ಲ ಎಂಬುವುದನ್ನು ನಾವೆಲ್ಲಾ ಮರೆಯಬಾರದು ಎಂದು ಉಪರಾಷ್ಟ್ರಪತಿ ಜಗದೀಪ್ ಧನಕರ್ ಹೇಳಿದರು. ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್, ಬಿಜೆಪಿ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್. ಸಂತೋಷ್ ಉಪಸ್ಥಿತರಿದ್ದರು.

**<><*<><>*><>**

ಆಹಾರ ಸಂಸ್ಕರಣಾ ಘಟಕಗಳು ಸೇರಿದಂತೆ ಹಲವು ಉದ್ದಿಮೆಗಳಿಗೆ ನೀಡಿರುವ ಮಾರುಕಟ್ಟೆ ಶುಲ್ಕ ವಿನಾಯಿತಿಯ ಅವಧಿ ಮುಗಿದಿದ್ದರೆ, ಪುನಃ ಶುಲ್ಕ ವಿನಾಯಿತಿ ವಿಸ್ತರಣೆ ಮಾಡುವುದು ಬೇಡ ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್, ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಮಂಡ್ಯ ಜಿಲ್ಲೆಯ ಎಲ್ಲ ಎಪಿಎಂಸಿಗಳ ಪ್ರಗತಿ ಪರಿಶೀಲನೆ ನಡೆಸಿದ ಸಚಿವರು, ಎಪಿಎಂಸಿಗಳನ್ನು ಸದೃಢಗೊಳಿಸಲು ಕಠಿಣ ಕ್ರಮ ಅನಿವಾರ್ಯ. ಮಾರುಕಟ್ಟೆ ಶುಲ್ಕ ವಿನಾಯಿತಿಯನ್ನು ಯಾವ ಸ್ವರೂಪದ ಉದ್ದಿಮೆಗಳಿಗೆ ನೀಡಲಾಗಿದೆ. ಇದರಿಂದ ಎಪಿಎಂಸಿಗೆ ವಾರ್ಷಿಕ ಎಷ್ಟು ನಷ್ಟ ಉಂಟಾಗುತ್ತಿದೆ ಎಂಬ ಬಗ್ಗೆ ಸಮೀಕ್ಷೆ ನಡೆಸಿ, ವರದಿ ಸಿದ್ಧಪಡಿಸುವಂತೆ ಸೂಚಿಸಿದರು. ಬಹುತೇಕ ಎಪಿಎಂಸಿಗಳಲ್ಲಿ ಗೋದಾಮುಗಳು ಖಾಲಿ ಇದ್ದರೂ ಅವುಗಳನ್ನು ಬಾಡಿಗೆ ನೀಡಲು ನಿರ್ಲಕ್ಷ್ಯ ಮಾಡುತ್ತಿರುವುದು ಗಮನಕ್ಕೆ ಬಂದಿದೆ. ಕಾರ್ಯದರ್ಶಿಗಳು ಇದನ್ನು ಆದ್ಯತೆ ಮೇಲೆ ಪರಿಗಣಿಸಿ, ಖಾಲಿ ಇರುವ ಗೋದಾಮುಗಳನ್ನು ಬಾಡಿಗೆಗೆ ನೀಡಲು ಕ್ರಮ ಕೈಗೊಳ್ಳಬೇಕು. ದುಸ್ಥಿತಿಯಲ್ಲಿರುವ ಗೋದಾಮುಗಳನ್ನು ನೆಲಸಮ ಮಾಡಿ, ಈ ನಿವೇಶನವನ್ನು ಯಾವ ರೀತಿ ಬಳಕೆ ಮಾಡಿಕೊಳ್ಳಬಹುದು ಎಂಬ ಬಗ್ಗೆ ಯೋಜನೆ ರೂಪಿಸಬೇಕು ಎಂದು ಸಚಿವ ಶಿವಾನಂದ ಪಾಟೀಲ್ ಸಲಹೆ ನೀಡಿದರು.

**<><*<><>*><>**

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಮೇಲೆ ನಡೆಯುವ ದೌರ್ಜನ್ಯ ಪ್ರಕರಣಗಳ ಕುರಿತಂತೆ ಸಮರ್ಪಕ ರೀತಿಯಲ್ಲಿ ತನಿಖೆ ನಡೆಸುವಂತೆ ಉತ್ತರ ಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಕಾರವಾರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು ನಡೆದ ಜಿಲ್ಲಾ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪೊಲೀಸ್ ಇಲಾಖೆಯಲ್ಲಿ ದಾಖಲಾಗುವ ಪ್ರಕರಣಗಳ ಬಗ್ಗೆ ಸೂಕ್ತ ತನಿಖೆ ನಡೆಸಿ, ಆರೋಪ ಪಟ್ಟಿ ಸಲ್ಲಿಸುವಂತೆ ನಿರ್ದೇಶಿಸಿದರು. ಜಿಲ್ಲೆಯಲ್ಲಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಸ್ಮಶಾನ ಭೂಮಿಗಳು ಒತ್ತುವರಿಯಾಗದಂತೆ ಎಚ್ಚರವಹಿಸಬೇಕು. ಅವುಗಳಿಗೆ ಕಾಂಪೌಂಡ್ ನಿರ್ಮಾಣ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಬೇಕು. ಎಲ್ಲಾ ಇಲಾಖೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಶ್ರೇಯೋಭಿವೃದ್ಧಿಗೆ ಮೀಸಲಿಟ್ಟಿರುವ ಅನುದಾನವನ್ನು ಸಮರ್ಪಕ ರೀತಿಯಲ್ಲಿ ಬಳಕೆ ಮಾಡಬೇಕು. ಸಿದ್ದಿ ಜನಾಂಗದವರಿಗೆ ವಿತರಿಸಲಾಗುವ ಪೌಷ್ಠಿಕ ಆಹಾರವನ್ನು ಆಯಾ ತಿಂಗಳಿನಲ್ಲಿಯೇ ವಿತರಿಸಲು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

**<><*<><>*><>**

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ದೇವನಹಳ್ಳಿ ತಾಲೂಕಿನ ಸಾದಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ಇಂದು ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ ನಡೆಯಿತು. ಕುಷ್ಠರೋಗ ಜಾಗೃತಿ ಕರ ಪತ್ರಗಳನ್ನು ಬಿಡುಗಡೆಗೊಳಿಸಿ ಮಾತನಾಡಿದ ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿ ಡಾ. ನಾಗರಾಜ್, ಕುಷ್ಠ ಮುಕ್ತ ಭಾರತ ನಿರ್ಮಾಣಕ್ಕೆ ಪಣ ತೊಡಬೇಕಿದೆ ಎಂದು ಹೇಳಿದರು.

**<><*<><>*><>**

ಏಳನೇ ಆವೃತ್ತಿಯ ಇಂಡಸ್‌ಇಂಡ್ ಬ್ಯಾಂಕ್, ನಾಗೇಶ್ ಟ್ರೋಫಿ ರಾಷ್ಟ್ರೀಯ ಟಿ-೨೦ ಅಂಧರ ಕ್ರಿಕೆಟ್ ಪಂದ್ಯಾವಳಿಯಲ್ಲಿ ದೆಹಲಿ ತಂಡವನ್ನು ಮಣಿಸಿ, ನಾಲ್ಕನೇ ಬಾರಿಗೆ ಚಾಂಪಿಯನ್ನಾಗಿ ಆಂಧ್ರಪ್ರದೇಶದ ಅಂಧರ ಕ್ರಿಕೆಟ್ ತಂಡ ಹೊರಹೊಮ್ಮಿದೆ. ಟಾಸ್ಕ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಆಂಧ್ರಪ್ರದೇಶ, ನಿಗದಿತ ೨೦ ಓವರ್‌ಗಳಲ್ಲಿ ಒಂದು ವಿಕೆಟ್ ನಷ್ಟಕ್ಕೆ ೨೫೪ ರನ್‌ಗಳನ್ನು ಕಲೆ ಹಾಕಿತು. ಆಂಧ್ರಪ್ರದೇಶ ಪರ ಅಜಯ್ ಕುಮಾರ್ ರೆಡ್ಡಿ ಅಜೇಯ ೧೦೪ ರನ್ ಗಳಿಸಿದರು. ಈ ಗುರಿಯನ್ನು ಬೆನ್ನತ್ತಿದ ದೆಹಲಿ ತಂಡ, ೨೦ ಓವರ್‌ಗಳಲ್ಲಿ ೯ ವಿಕೆಟ್‌ಗಳನ್ನು ಕಳೆದುಕೊಂಡು ೧೮೯ ರನ್ ಗಳಿಸಲಷ್ಟೇ ಶಕ್ತವಾಯಿತು. ಟ್ರೋಫಿ ಗೆದ್ದ ಆಂಧ್ರಪ್ರದೇಶ ತಂಡಕ್ಕೆ ಒಂದು ಲಕ್ಷ ೨೫ ಸಾವಿರ ರೂಪಾಯಿ ನಗದು ಬಹುಮಾನ ವಿತರಿಸಲಾಯಿತು. ಅಜಯ್ ಕುಮಾರ್ ರೆಡ್ಡಿ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು.

**<><*<><>*><>**

ಹಸಿರು ನ್ಯಾಯಾಧೀಕರಣ ಆದೇಶ ಹಾಗೂ ಜಿಲ್ಲಾಧಿಕಾರಿ ಸೂಚನೆಯಂತೆ ಮುಳಬಾಗಿಲು ತಾಲೂಕಿನ ಎಲ್ಲಾ ಕೆರೆಗಳ ಒತ್ತುವರಿ ತೆರವುಗೊಳಿಸುವ ಕಾರ್ಯ ಇಂದಿನಿಂದ ಆರಂಭವಾಗಿದೆ ಎಂದು ಮುಳಬಾಗಿಲು ತಾಲೂಕಿನ ತಹಸೀಲ್ದಾರ್ ವಿ.ಗೀತಾ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**